
ಬೆಂಗಳೂರು

06-06-2024-2
06 Jun 2024



ಅಜಿತ್ ಸಾಗರ್.ಎನ್. ಪ್ರಧಾನ ಸಂಪಾದಕರು

RNI: KAR/KAN/58071/93

IS

ಇಂದು ಸಂಜೆ

ನೈಜ ಸುದ್ದಿಗಳ ಸಮಗ್ರ ಚಿತ್ರಣ

INDU SANJE, Kannada evening daily

ಬೆಂಗಳೂರು, ಮೈಸೂರು, ಮಂಡ್ಯ, ಹಾಸನ, ಕೋಲಾರ, ಚಿಕ್ಕಬಳ್ಳಾಪುರ, ಚಾಮರಾಜನಗರ, ರಾಮನಗರ, ಹುಬ್ಬಳ್ಳಿಯಿಂದ ಏಕಕಾಲಕ್ಕೆ ಪ್ರಕಟಿತ

Bangalore, Mysore, Mandya, Hassan, Kolar, Chikkaballapur, Chamarajnagara, Ramanagara, Hubbali Published simultaneously



ವಿ.ನಾಗರಾಜು, ಸಂಸ್ಥಾಪಕರು

POWERED BY.
KHUSHI HOST™

# ಹುಬ್ಬಳ್ಳಿಯ ನೃಪತುಂಗ ಬೆಟ್ಟ, ಗಬ್ಬೂರು, ವಿವಿಧ ಪ್ರದೇಶಗಳಲ್ಲಿ 1001 ಸಸಿ ನೆಡುವಿಕೆ ಅಭಿಯಾನಕ್ಕೆ ಚಾಲನೆ

ಹುಬ್ಬಳ್ಳಿ:ಜನರುಪ್ಲಾಸ್ಟಿಕ್‌ಬಳಕೆಯನ್ನುಕಡೆಗಣಿಸಬೇಕು. ಸಾರ್ವಜನಿಕರು ಪರಿಸರ ಸಂರಕ್ಷಣೆಗೆ ಮುಂದಾಗಬೇಕುಎಂದು1ನೇಹೆಚ್ಚುವರಿಜಿಲ್ಲಾಮತ್ತುಸತ್ರನ್ಯಾಯಾಧೀಶರಾದ ಪರಮೇಶ್ವರ ಪ್ರಸನ್ನ ಬಿ. ಹೇಳಿದರು.

ಇಂದು ವಿದ್ಯಾನಗರದ ಹೊಸ ಕೋರ್ಟ್ ಆವರಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ ಹುಬ್ಬಳ್ಳಿ, ಅರಣ್ಯ ಇಲಾಖೆ ಮತ್ತು ತೋಟಗಾರಿಕೆ ಇಲಾಖೆ, ಹುಬ್ಬಳ್ಳಿ ಇವುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಸಸಿ ನೆಡುವ ಮೂಲಕ ಚಾಲನೆ ನೀಡಿ, ಅವರು ಮಾತನಾಡಿದರು.

1973 ರಲ್ಲಿ ವಿಶ್ವಸಂಸ್ಥೆಯು ಮೊದಲ ಬಾರಿಗೆ ಪರಿಸರ ಸಂರಕ್ಷಣೆ ಬಗ್ಗೆ ಅರಿವು ಮೂಡಿಸುವ ಹಿತದೃಷ್ಟಿಯಿಂದ ವಿಶ್ವದಾದ್ಯಂತ ವಿಶ್ವ ಪರಿಸರ ದಿನವನ್ನು ಆಚರಿಸಲಾಯಿತು. ಪ್ರಸ್ತುತ ಸುಮಾರು 173 ದೇಶಗಳಲ್ಲಿ ಪರಿಸರ ದಿನವನ್ನು ಆಚರಣೆ ಮಾಡಲಾಗುತ್ತಿದೆ. ಪರಿಸರ ಸಂರಕ್ಷಣೆ ಮಾಡುವ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಹಾಗೂ ಪರಿಸರವನ್ನು ಹಾಳು ಮಾಡದಂತೆ ತಡೆಯುವುದು ವಿಶ್ವ ಪರಿಸರ ದಿನದ ಮೂಲ ಉದ್ದೇಶವಾಗಿದೆ. ಆಧುನಿಕತೆಯಿಂದ ಮನುಷ್ಯ ತನ್ನ ಸ್ವಾರ್ಥಕ್ಕಾಗಿ ಪರಿಸರವನ್ನು ಹಾಳು ಮಾಡುತ್ತಿದ್ದಾನೆ. ಅಲ್ಲದೇ ಪರಿಸರದ ಕುರಿತು ಜನರಲ್ಲಿ ಕಾಳಜಿ ಕಡಿಮೆಯಾಗುತ್ತಿದೆ. ಇಂದು ಅತೀ ಹೆಚ್ಚಾಗಿ ಪ್ಲಾಸ್ಟಿಕ್ ಬಳಕೆಯನ್ನು ಮಾಡುತ್ತಿದ್ದೇವೆ. ಪ್ಲಾಸ್ಟಿಕ್ ತ್ಯಾಜ್ಯವನ್ನು ರಸ್ತೆ, ಕೆರೆ, ಕೊಳ ಸೇರಿದಂತೆ ವಿವಿಧ ಸಾರ್ವಜನಿಕ ಪ್ರದೇಶಗಳಲ್ಲಿ ಎಸೆಯುತ್ತಿದ್ದೇವೆ. ಇದರಿಂದಾಗಿ ಪರಿಸರ ಹಾಳಾಗುತ್ತಿದೆ. ತ್ಯಾಜ್ಯವನ್ನು ಎಸೆಯುವವರ ಮೇಲೆ ಸಂಬಂಧಪಟ್ಟ ಪಾಲಿಕೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಅವಶ್ಯಕತೆ, ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಪ್ಲಾಸ್ಟಿಕ್ ಬಳಕೆಯನ್ನು ಮಾಡಬೇಕು. ಕೆರೆ, ರಸ್ತೆ ಹಾಗೂ ಸಾರ್ವಜನಿಕ ಪ್ರದೇಶಗಳಲ್ಲಿ ಜನರು ತ್ಯಾಜ್ಯವನ್ನು ಹಾಕದಂತೆ ಅಧಿಕಾರಿಗಳು ಕ್ರಮ ವಹಿಸಬೇಕಿದೆ ಎಂದರು.

ವಕೀಲರ ಸಂಘದ ಅಧ್ಯಕ್ಷರಾದ ಎಮ್.ಎಸ್.ಬಾಣದ ಮಾತನಾಡಿ, ಎಲ್ಲರೂ ಆರೋಗ್ಯದ ಬಗ್ಗೆ ಕಾಳಜಿ ವಹಿಸುವ ಹಾಗೆ ಪರಿಸರದ ಬಗ್ಗೆ ಕಾಳಜಿ ವಹಿಸಬೇಕು. ಸಾಲು ಮರದ ತಿಮ್ಮಕ್ಕ ಅವರ ಮನೋಭಾವನೆ ಎಲ್ಲರಲ್ಲಿಯೂ ಮೂಡಬೇಕಿದೆ. ದುಡಿದ ಹಣವನ್ನು



ಆಸ್ಪತ್ರೆಗೆ ಹಾಕುವ ಬದಲು ಸಸಿ ನೆಡುವ ಮೂಲಕ ಆರೋಗ್ಯವನ್ನು ಕಾಪಾಡಿಕೊಂಡು ಹಣ ಉಳಿತಾಯ ಮಾಡಬಹುದು. ವಿಶ್ವ ಪರಿಸರ ದಿನ ಜೂನ್ 5 ಕ್ಕೆ ಮಾತ್ರ ಸೀಮಿತವಾಗಬಾರದು. ಪ್ರತಿಯೊಂದು ಗ್ರಾಮ, ನಗರ ಪ್ರದೇಶದ ಜನರಲ್ಲಿ ಪರಿಸರದ ಕುರಿತು ಜಾಗೃತಿ ಮೂಡಿಸುವುದು ಅವಶ್ಯಕವಾಗಿದೆ ಎಂದು ತಿಳಿಸಿದರು.

ವಲಯ ಅರಣ್ಯ ಅಧಿಕಾರಿಗಳಾದ ಆರ್.ಎಸ್. ಉಪ್ಪಾರ ಮಾತನಾಡಿ, ಇಂದು ನಾವು ಆಧುನಿಕತೆಯಲ್ಲಿ ಪರಿಸರ ಸಂರಕ್ಷಣೆ ಮಾಡುವುದನ್ನು ಮರೆಯುತ್ತಿದ್ದೇವೆ. ದೊಡ್ಡ ದೊಡ್ಡ ಕಟ್ಟಡಗಳ ನಿರ್ಮಾಣ, ಅಭಿವೃದ್ಧಿ ಕಾರ್ಯಗಳಿಂದ ಪರಿಸರದ ಮೇಲೆ ನಿಷ್ಕಾಳಜಿ ತೋರುತ್ತಿದ್ದೇವೆ. ಪ್ರತಿ ದಿನವೂ ಸಹ ಸಸಿ ನೆಡುವ ಕಾರ್ಯಕ್ರಮಗಳು ನಡೆಯುತ್ತಿರಬೇಕು. ಹೆಚ್ಚಾಗಿ ಮರಗಳನ್ನು ಬೆಳೆಸುವುದರಿಂದ ಬರಗಾಲ ಪರಿಸ್ಥಿತಿ ಉಂಟಾಗುವುದನ್ನು ತಡೆಯಬಹುದು. ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಪರಿಸರ ಸಹಕಾರಿಯಾಗಿದೆ. ಹೀಗಾಗಿ ಪರಿಸರ ರಕ್ಷಣೆಗೆ ಎಲ್ಲರೂ ಪಣತೊಡಬೇಕು ಎಂದು ವಿವರಿಸಿದರು.

ಇದೇ ಸಂದರ್ಭದಲ್ಲಿ ನೃಪತುಂಗ ಬೆಟ್ಟ, ಗಬ್ಬೂರು ಹಾಗೂ ವಿವಿಧ ಪ್ರದೇಶಗಳಲ್ಲಿ 1001 ಸಸಿಗಳ ನೆಡುವಿಕೆ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಅಲ್ಲದೇ ಸಾಂಕೇತಿಕವಾಗಿ ಸಸಿಗಳನ್ನು ವಿತರಣೆ ಮಾಡಲಾಯಿತು.

ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರಾದ ಪ್ರಭುಲಿಂಗ ಗಡ್ಡದ, ಅರಣ್ಯ ಅಧಿಕಾರಿ ಪ್ರಕಾಶ ಕರಗುಪ್ಪಿ, ಹುಬ್ಬಳ್ಳಿ ನ್ಯಾಯಾಲಯದ ಎಲ್ಲಾ ಗೌರವಾನ್ವಿತ ನ್ಯಾಯಾಧೀಶರು, ಅರಣ್ಯ ಇಲಾಖೆ, ತೋಟಗಾರಿಕೆ ಇಲಾಖೆಯ ಸಿಬ್ಬಂದಿ ಪಾಲ್ಗೊಂಡಿದ್ದರು.

ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ರಾಜಶೇಖರ ತಿಳಗಂಜಿ ನಿರೂಪಿಸಿ, ವಂದಿಸಿದರು.



ಈಗಿನ ದಿನಮಾನದಲ್ಲಿ ಗಿಡವನ್ನು ಕಡಿಯುವುದು ಬಿಟ್ಟು ಗಿಡವನ್ನು ಹಚ್ಚುವುದನ್ನು ಕಲಿತರೆ ಪರಿಸರವು ಸುಧಾರಣೆ ಯಾಗುತ್ತದೆ ಮತ್ತು ಕಾಲಕಾಲಕ್ಕೆ ಮಳೆ ಆಗುತ್ತದೆ ಬಿಸಿಲಿನ ತಾಪಮಾನ ಕಮ್ಮಿ ಆಗುತ್ತದೆ ನಮಗೆಲ್ಲ ಉಸಿರಾಡಲು ಉತ್ತಮವಾದ ಹವಾಮಾನವು ಸಿಗುತ್ತದೆ ಕಾರಣ ಕಾಡನ್ನು ಬೆಳೆಸಿ, ನಾಡನ್ನು ಉಳಿಸಿ ಎಂಬ ಸಂದೇಶದ ಮೂಲಕ ಇಂದು ವಿಶ್ವ ಪರಿಸರ ದಿನಾಚರಣೆಯ ಪ್ರಯುಕ್ತ ಛಬ್ಬಿ ಗ್ರಾಮದ ಪ್ರೌಢ ಶಾಲೆಯಲ್ಲಿ ಸಸಿ ನಡುವುದರ ಮೂಲಕ ಆಚರಿಸಲಾಯಿತು ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಹಮೀದ ಮುಲ್ಲಾ ಸದಸ್ಯರಾದ ರುದ್ರಪ್ಪಾ ಅಗಡಿ ಗದಿಗೇಪ್ಪ ಬಂಡಿವಾಡ ರತ್ನವ್ವ ತಳವಾರ ಝುರಿನಾ ದುಂಡಶಿ ಗ್ರಾಮದ ಅಭಿರುದ್ದಿ ಅಧಿಕಾರಿಗಳಾದ ಚದ್ರಶೇಖರ ಹಿರಿಯರಾದ ದೇವೇಂದ್ರಪ್ಪ ಕಾಗೇನವರ ರಾಮಣ್ಣ ಸತ್ಯನಾಯಕ್ಕರ ಯುವಕರಾದ ಸಂದೀಪ ಪ್ಯಾಟಿ ಧಾದಾಪೀರ ಜಮಖಾನೆ ಮಂಜುನಾಥ ನೇರ್ತಿ ಶೀವಯ್ಯ ಹೀರೆಮಠ ಶಿವಾನಂದ ಹಡಪದ ಮಂಜುನಾಥ ಪಾಟೀಲ ಇನ್ನೂ ಅನೇಕರು ಭಾಗವಹಿಸಿದ್ದರು.

# ಸಚಿವರ ರಾಜೀನಾಮೆ ಕೇಳಿಲ್ಲ:ಸಿಎಂ

ಬೆಂಗಳೂರು: ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಾದ ಹಗರಣಕ್ಕೆ ಸಂಬಂಧಪಟ್ಟಂತೆ ತನಿಖೆ ನಡೆಸಲು ವಿಶೇಷ ತನಿಖಾ ತಂಡವನ್ನು ರಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಘಟನೆ ಸಂಬಂಧ ಸಚಿವರನ್ನು ಕರೆಸಿ ನಾನು ಮಾತನಾಡಿದ್ದೇನೆ. ಅವರ ರಾಜೀನಾಮೆಯನ್ನು ಕೇಳಿಲ್ಲ ಎಂದು ಇದೇ ಸಂದರ್ಭದಲ್ಲಿ ಸ್ಪಷ್ಟ ಪಡಿಸಿದ್ದಾರೆ.

ಮಾತನಾಡಿದಕ್ಷಣ ರಾಜೀನಾಮೆ ಕೊಡುವುದಕ್ಕೆ ಆಗತ್ತಾ ಎಂದು ಬಿಜೆಪಿ ಅವರ ಆರೋಪಗಳಿಗೆ ತಿರುಗೇಟು ನೀಡಿದ ಸಿಎಂ, ವಿಶೇಷ ತನಿಖಾ ತಂಡ ತನಿಖೆ ಮಾಡುತ್ತೆ. ಈ ಬಗ್ಗೆ ಅವರು ತೀರ್ಮಾನ ಮಾಡುತ್ತಾರೆ ಎಂದು ತಿಳಿಸಿದ್ದಾರೆ.



## ಪರಿಸರ ದಿನಾಚರಣೆ

ಈ ದಿನ ಜೂನ್ 5 2024 "ವಿಶ್ವ ಪರಿಸರ" ದಿನದಂದು ಕರ್ನಾಟಕ ವಿಜ್ಞಾನ ಮಹಾವಿದ್ಯಾಲಯದಲ್ಲಿ ಸುಮಾರು 50 ಗಿಡಗಳನ್ನು ನೇಡಲಾಯಿತು. ಕರ್ನಾಟಕ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯರಾದ ಪ್ರೊ. ಎಮ್.ಎಸ್.ಸಾಳುಂಕೆ ಮೆಡಮ್ ರವರು ಗಿಡ ನೆಡುವ ಮೂಲಕ "ವಿಶ್ವ ಪರಿಸರ ದಿನಕ್ಕೆ" ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಸಾಂಸ್ಕೃತಿಕ ಚಟುವಟಿಕೆಗಳ ಚೇರಮನ್ ರಾದ ಡಾ. ವಿ.ಬಿ.ಸಾವಿರಮಠ, ಡಾ.ಜಿ.ಎಚ್. ಮಳಿಮಠ ಪ್ರೊ.ಬ್ಲೇಸ್.ಲೋಬೊ,ಪ್ರೊ.ಕೆ.ಕೊಟ್ರೇಶಾ,ಡಾಎಸ್.ಪಿ.ಮಾಸ್ತಿ, ಹಾಗೂ ಪ್ರಾಣಿಶಾಸ್ತ್ರ ವಸ್ತುಸಂಗ್ರಹಾಲಯ ಟ್ಯಾಕ್ಸಿಡರ್ಮಿಸ್ಟರಾದ .ನವೀನ ಪ್ಯಾಟಿಮನಿ,ಡಾ.ಗೀತಾ.ಚವಾನ,ಡಾ.ಜೋತಿ.ದೊಡಮನಿ, ಡಾ.ರೇಷ್ಮಾ.ನೇಸರಗಿ,ಎಸ್.ಬಿ.ರಡ್ಡೇರ, .ಎ.ಎಸ್.ಕಲ್ಲೋಳಿಕರ, ಶ್ರೀಮತಿ.ವಿ. ಎಮ್.ಕಣದಳಿ ಮತ್ತು ವಿವಿಧ ವಿಭಾಗದ ಮುಖ್ಯಸ್ಥರು ಹಾಗೂ ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿಗಳು,ವಿದ್ಯಾರ್ಥಿಗಳು ಹಾಜರಿದ್ದರು.